# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

## ಮೇ 2022 : ವಾರ್ಡ್ ಸಮಿತಿಯ 1ನೇ ಸಭೆಯ ನಡವಳಿಗಳು

***********

ಉಲ್ಲೇಖ : ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:
ಬಿ12(5)/ಪಿಆರ್/35/2020-21, ದಿನಾಂಕ:22-09-2021.

******

ದಿನಾಂಕ : 12-05-2022.
ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕಾನಂದ ಉದ್ಯಾನವನ, ಗಿರಿನಗರ
ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಸುನಿಲ್‌ಕುಮಾರ್.ಪಿ | ಮಾನ್ಯ ಮುಖ್ಯ ನಗರ ಯೋಜಕರು ಹಾಗೂ ನೋಡಲ್ ಅಧಿಕಾರಿಗಳು. |
| 2 | ಶ್ರೀ ರಮೇಶ್.ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ. |
| 3 | ಶ್ರೀ ಸುರೇಶ್.ಬಿ.ವಿ | ಮುಖ್ಯ ಪೇದೆ, ಗಿರಿನಗರ ಪೋಲೀಸ್ ಠಾಣೆ |
| 4 | ಶ್ರೀ ಸಂತೋಷ್ | ಸೂಪರ್ ವೈಸರ್– Solid Waste. |
| 5 | ಶ್ರೀ ಮಂಜುನಾಥ್ | ವಾಟರ್ ಇನ್ಸ್‌ಪೆಕ್ಟರ್,ಬಿ.ಡಬ್ಲ್ಯೂ.ಎಸ್.ಎಸ್.ಬಿ.ಗಿರಿನಗರ. |
| 6 | ಶ್ರೀ ರವಿಕುಮಾರ್ | ಎಸ್.ಡಬ್ಲ್ಯೂ.ಎಮ್ ವಾರ್ಡ್ ನಂ-162,ಗಿರಿನಗರ |
| 7 | ಶ್ರೀ ಚಂದ್ರಶೇಖರ್ | ಕಿರಿಯ ಅಭಿಯಂತರರು, ಬೆಸ್ಕಾಂ |
| 8 | ಶ್ರೀ ಅಭಿಷೇಕ್ | ಬೀದಿ ದೀಪಗಳ ಇಲಾಖೆ ನಿರ್ವಾಹಕರು |
| 9 | ಶ್ರೀ ರಂಜೀತ್ | ಮಾರ್ಷಲ್, ಗಿರಿನಗರ ವಾರ್ಡ್ |
| 10 | ಶ್ರೀ ಎಸ್.ಎಂ.ಆರ್.ಪ್ರಸಾದ್ | ವಾರ್ಡ್ ಸದಸ್ಯರು-ಗಿರಿನಗರ. |
| 11 | ಶ್ರೀ ಆರ್ ಸತೀಶ್ | ವಾರ್ಡ್ ಸದಸ್ಯರು-ಗಿರಿನಗರ. |

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಆದ ಶ್ರೀ ಸುನಿಲ್‌ಕುಮಾರ್.ಪಿ ರವರು ಸ್ವ ಪರಿಚಯ ಮಾಡಿಕೊಂಡು ಸದಸ್ಯರೆಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹೊಸಕೆರೆಹಳ್ಳಿ ಕ್ರಾಸ್ 2ನೇ ಮುಖ್ಯ ರಸ್ತೆ ಶ್ರೀವಿದ್ಯಾನಗರ ಬಸ್ ನಿಲ್ದಾಣದ ಎದುರು ಖಾಲಿ ನಿವೇಶನದಲ್ಲಿನ ಕಸವನ್ನು ತೆರವುಮಾಡಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು **ಸೂಚಿಸಿದರು.**

2. ಶ್ರೀವಿದ್ಯಾನಗರ 1ನೇ ಅಡ್ಡರಸ್ತೆ 8ನೇ ಮುಖ್ಯರಸ್ತೆಯಲ್ಲಿ ಮ್ಯಾನ್‌ಹೋಲ್ ಕುಸಿದಿರುವ ಬಗ್ಗೆ ಪರಿಶೀಲಿಸಿ ಸರಿಪಡಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾಟರ್ ಇನ್ಸ್‌ಪೆಕ್ಟರ್‌ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

3. ಗಿರಿನಗರ ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಒಳಚರಂಡಿ ಕೊಳವೆ ಬದಲಾಯಿಸಲು ಕೈಗೊಳ್ಳುವ ಕಾಮಗಾರಿಗಳಲ್ಲಿ ಹಾಲಿ ಮನೆಗಳ ಒಳಚರಂಡಿ ಸಂಪರ್ಕವನ್ನು ಹೊಸ ಕೊಳವೆಗೆ ಜೋಡಿಸಲು ಅವಶ್ಯವಾದ ಬೆಂಡ್‌ನ ಬಾಬ್ತನ್ನು ಅಂದಾಜು ಪಟ್ಟಿಯಲ್ಲಿ ಅಳವಡಿಸಿಕೊಂಡು ಕಾಮಗಾರಿ ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾಟರ್ ಇನ್ಸ್‌ಪೆಕ್ಟರ್‌ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

4. ವಾರ್ಡ್–162ರ 50 ಅಡಿರಸ್ತೆಯಲ್ಲಿ ಕುಸುಮ ಆಸ್ಪತ್ರೆಯಿಂದ ಪಾದಚಾರಿ ಮಾರ್ಗದಲ್ಲಿ ನಿರ್ಮಿಸಿರುವ ಮೆಟ್ಟಿಲುಗಳನ್ನು ತೆರವುಗೊಳಿಸಲು ವಾರ್ಡ್ ಅಭಿಯಂತರರಿಗೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿದರು.

5. ಶ್ರೀವಿದ್ಯಾನಗರ 1ನೇ ಅಡ್ಡರಸ್ತೆಯ ಸ್ವತ್ತಿನ ಸಂಖ್ಯೆ 11ಎಎಸ್, ನಿವೇಶನದ ಮಾಲೀಕರು ರಸ್ತೆಯನ್ನು ಒತ್ತುವರಿ ಮಾಡಿರುವ ಬಗ್ಗೆ ಪರಿಶೀಲಿಸಿಸಲು ವಾರ್ಡ್ ಅಭಿಯಂತರರಿಗೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿದರು.

6. ಗಿರಿನಗರ ವಾರ್ಡ್–162ರ ವ್ಯಾಪ್ತಿಯಲ್ಲಿ ಮಳೆಯಿಂದ ಬಿದ್ದಿರುವ ಮರದ ತುಂಡುಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಅರಣ್ಯ ಇಲಾಖೆರವರಿಗೆ ತಿಳಿಸಿ ಕ್ರಮಕೈಗೊಳ್ಳಲು ವಾರ್ಡ್ ಅಭಿಯಂತರರಿಗೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿದರು.

7. ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಲು ತೆಗೆದ ಮಣ್ಣನ್ನು ಕೂಡಲೇ ತೆರವುಗೊಳಿಸಲು ಕ್ರಮಕೈಗೊಳ್ಳಲು ವಾಟರ್ ಇನ್ಸ್‌ಪೆಕ್ಟರ್‌ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

8. ಹೊಸಕೆರೆಹಳ್ಳಿ ಕ್ರಾಸ್ ಹತ್ತಿರ ಪಾದಚಾರಿ ಮಾರ್ಗದಲ್ಲಿ ನಿಲ್ಲಿಸುವ ತಳ್ಳುವ ಗಾಡಿಗಳನ್ನು ಕಿರಿಯ ಆರೋಗ್ಯ ಪರಿವೀಕ್ಷಕರ ಸಹಯೋಗದೊಂದಿಗೆ ವಾರ್ಡ್ ಅಭಿಯಂತರರು ತೆರವುಗೊಳಿಸಲು ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿದರು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

12/05/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 162, ಗಿರಿನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು. ಬೃ.ಬೆ.ಮ.ಪಾಲಿಕೆ. ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ವಲಯ ಆಯುಕ್ತರು ( ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.